ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ADMIOEST(3)/31/2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 25.08.2021

**ಸುತ್ತೋಲೆ**

**ವಿಷಯ:** 2021-22ನೇ ಶೈಕ್ಷಣಿಕ ಸಾಲಿನ ಬೆಸ (ODD) ಸೆಮಿಸ್ಟರ್‌ಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು / ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಸಂಸ್ಥೆಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅವಶ್ಯಕವಾಗಿರುವ ಅರೆಕಾಲಿಕ ಅತಿಥಿ ಉಪನ್ಯಾಸಕರ ಸಂಖ್ಯಾ ಮಾಹಿತಿಯನ್ನು ಸಲ್ಲಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021-22ನೇ ಶೈಕ್ಷಣಿಕ ಸಾಲಿನ ಬೆಸ (ODD) ಸೆಮಿಸ್ಟರ್‌ಗೆ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರದಲ್ಲಿ ಉಳಿಕೆಯಾಗುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅವಶ್ಯಕವಾಗಿರುವ ಅರೆಕಾಲಿಕ ಅತಿಥಿ ಉಪನ್ಯಾಸಕರ ಸಂಖ್ಯಾ ಮಾಹಿತಿಯನ್ನು ಗೂಗಲ್ ಫಾರಂ (Google Form Link) "**https://forms.gle/Y8Ygo2PP1qQiiUSA8**" ನಲ್ಲಿ ದಿನಾಂಕ: **27.08.2021** ರೊಳಗಾಗಿ ತಪ್ಪದೇ ಅಪ್‌ಡೇಟ್ ಮಾಡಲು ತಿಳಿಸಿದೆ.

ಗೂಗಲ್ ಫಾರಂನಲ್ಲಿ ಅಪ್‌ಡೇಟ್ ಮಾಡಿದ ಮಾಹಿತಿಯ ದೃಢೀಕೃತ ನಮೂನೆಯನ್ನು ಇ-ಮೇಲ್ ವಿಳಾಸ: est1adte@gmail.com ಕ್ಕೆ ಸಲ್ಲಿಸುವುದು.

**ಆಡಳಿತಾಧಿಕಾರಿ,**
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ:-**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ.

**ಪ್ರತಿ:-**

ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;